ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ ದಿನಾಂಕ : DATE : 28/05/2019

# ಶಾಸಕರಾಗಿ ಅವಿನಾಶ್ ಜಾಧವ್, ಶಿವಳ್ಳಿ ಪತ್ನಿ ಕುಸುಮಾ ಪ್ರಮಾಣ

ಕ.ಪ್ರ 28/5/19

**ಬೆಂಗಳೂರು:** ಇತ್ತೀಚೆಗೆ ನಡೆದ ಚಿಂಚೋಳಿ ಮತ್ತು ಕುಂದಗೋಳ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಗೆಲುವು ಸಾಧಿಸಿದ್ದ ಅವಿನಾಶ್ ಜಾಧವ್ ಮತ್ತು ಕುಸುಮಾ ಶಿವಳ್ಳಿ ಅವರು ಶಾಸಕರಾಗಿ ಸೋಮವಾರ ವಿಧಾನಸೌಧದಲ್ಲಿನ ಸ್ಪೀಕರ್ ಕಚೇರಿಯಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಸ್ಪೀಕರ್ ರಮೇಶ್ ಕುಮಾರ್ ಇಬ್ಬರಿಗೂ ಪ್ರಮಾಣ ವಚನ ಬೋಧಿಸಿದರು. ಚಿಂಚೋಳಿ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿ ಅವಿನಾಶ ಜಾಧವ್ ಗೆಲುವು ಸಾಧಿಸಿದ್ದರೆ, ಕುಂದಗೋಳ ಕ್ಷೇತ್ರದಿಂದ ಕುಸುಮಾ ಶಿವಳ್ಳಿ ಜಯಗಳಿಸಿದ್ದಾರೆ. ಅವಿನಾಶ್ ಜಾಧವ್ ಪ್ರಮಾಣ ವಚನ ಕಾರ್ಯಕ್ರಮದ ವೇಳೆ ನೂತನವಾಗಿ ಸಂಸದರಾಗಿರುವ ಡಾ.ಉಮೇಶ್ ಜಾಧವ್, ಮಾಜಿ ಸಚಿವರಾದ ಮಾಲಿಕಯ್ಯ ಗುತ್ತೇದಾರ್, ಬಾಬೂರಾವ್ ಚಿಂಚನಸೂರು, ವಿಧಾನಪರಿಷತ್ ಸದಸ್ಯ ಎನ್.ರವಿಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು. ಆದರೆ, ಕುಸುಮಾರ ಪ್ರಮಾಣವಚನ ವೇಳೆ ಕಾಂಗ್ರೆಸ್ಸಿನ ಮುಖಂಡರು ಕಂಡುಬರಲಿಲ್ಲ.

7